ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1305

ಸದಸ್ಯರ ಹೆಸರು ಶ್ರೀ. ಮುನಿರಾಜು ಗೌಡ ಪಿ.ಎಂ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವವರು ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ 08-03-2022

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯಾದ್ಯಂತ ಸರ್ಕಾರದ ಅಧೀನದಲ್ಲಿ ಎಷ್ಟು ಬಾಲಮಂದಿರ ಗಳನ್ನು ನಡೆಸಲಾಗುತ್ತಿದೆ;	ರಾಜ್ಯಾದ್ಯಂತ ಸರ್ಕಾರದ ಅಧೀನದಲ್ಲಿ ಒಟ್ಟು 69 ಬಾಲಮಂದಿರಗಳು ಕಾರ್ಯನಿರ್ವಹಿಸುತ್ತಿವೆ.
ಆ)	ಈ ಬಾಲಮಂದಿರಗಳಿಂದ ಮಕ್ಕಳು ಕಣ್ಮರೆಯಾಗುತ್ತಿರುವ ಪ್ರಕರಣಗಳು ಸರಕಾರದ ಗಮನಕ್ಕೆ ಬಂದಿದೆಯೇ;	ಹೌದು
ಇ)	2015-16 ರಿಂದ ಈಚೆಗೆ ರಾಜ್ಯದಲ್ಲಿ ಸರಕಾರದ ಅಧೀನದಲ್ಲಿ ಇರುವ ಬಾಲಮಂದಿರಗಳಿಂದ ಮಕ್ಕಳು ಕಣ್ಮರೆಯಾಗಿರುವ ಎಷ್ಟು ಪ್ರಕರಣಗಳು ವರದಿಯಾಗಿರುತ್ತದೆ;	2015-16 ರಿಂದ 2021ರ ಅಂತ್ಯದವರೆಗೆ 485 ಮಕ್ಕಳು ಕಾಣೆಯಾಗಿದ್ದು, ಇದರಲ್ಲಿ 344 ಮಕ್ಕಳನ್ನು ಪತ್ತೆ ಹಚ್ಚಲಾಗಿರುತ್ತದೆ. ಉಳಿದ ಮಕ್ಕಳನ್ನು ಪತ್ತೆ ಹಚ್ಚಲು ಪೊಲೀಸ್ ಠಾಣೆಗಳಲ್ಲಿ ಅನುಸರಣೆ ಮಾಡಲಾಗುತ್ತಿದೆ.
ಈ)	ಬಾಲಮಂದಿರಗಳಿಂದ ಮಕ್ಕಳು ಕಣ್ಮರೆಯಾಗುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಮತ್ತು ಕಣ್ಮರೆಯಾದ ಮಕ್ಕಳನ್ನು ಪತ್ತೆ ಹಚ್ಚುವ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?	ಮಕ್ಕಳ ವಿಷಯಗಳಿಗೆ ಸಂಬಂಧಿಸಿದಂತೆ ಆದ್ಯತೆ ಮೇರೆಗೆ ಕ್ರಮವಹಿಸಲು ಸರ್ಕಾರದ ಒಳಾಡಳಿತ ಇಲಾಖೆಯ ಆದೇಶ ಸಂಖ್ಯೆ: ಹೆಚ್.ಡಿ.20 ಪಿ ಸಿ ಸಿ 2021, ದಿನಾಂಕ:29-06-2021ರಲ್ಲಿ ಮಕ್ಕಳ ವಿಶೇಷ ಪೊಲೀಸ್ ಘಟಕಗಳನ್ನು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣಾ) ಕಾಯ್ದೆ 2015ರ ಕಲಂ 107ರನ್ವಯ ಎಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭಿಸಿ ಮಕ್ಕಳಿಗೆ ಸಂಬಂಧಿಸಿದ ವಿಷಯಗಳನ್ನು ಆದ್ಯತೆ ಮೇರೆಗೆ ಕ್ರಮವಹಿಸಲಾಗುತ್ತಿದೆ. ಮಕ್ಕಳು ಬಾಲಮಂದಿರಗಳಿಂದ ತಪ್ಪಿಸಿ ಕೊಳ್ಳದಂತೆ ಸಂಸ್ಥೆಗಳಲ್ಲಿ ಸಿ.ಸಿ.ಟಿ.ವಿ.ಯನ್ನು ಅಳವಡಿಸಲಾಗಿರುತ್ತದೆ. ಮಕ್ಕಳ ಸುರಕ್ಷತೆಗಾಗಿ ಬಾಹ್ಯ ಮೂಲಗಳಿಂದ ರಕ್ಷಕ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲಾಗಿದೆ. ಮಕ್ಕಳು ಬಾಲಮಂದಿರಗಳಿಂದ ತಪ್ಪಿಸಿಕೊಳ್ಳದಂತೆ ತಡೆಯಲು ಮಕ್ಕಳ ಮನ ಪರಿವರ್ತನೆಗಾಗಿ **"ಕಾಮನಬಿಲ್ಲು"** ಎಂಬ ಕಿರು ಚಿತ್ರವನ್ನು ಸಿದ್ಧಪಡಿಸಲಾಗಿದ್ದು, ಬಾಲಮಂದಿರಗಳಲ್ಲಿ

		ಹಾಲಿ ವಾಸ್ತವ್ಯ ಪಡೆದಿರುವ ಹಾಗೂ ಹೊಸದಾಗಿ ದಾಖಲಾಗುವ ಮಕ್ಕಳಿಗೆ ಆಗಿಂದಾಗ್ಗೆ ಪ್ರದರ್ಶಿಸುವ ಮೂಲಕ ಅರಿವು ಮೂಡಿಸಲು ಕ್ರಮಕೈಗೊಳ್ಳಲಾಗಿದೆ. ಮಕ್ಕಳು ಕಣ್ಮರೆಯಾದ ಕೂಡಲೇ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಕಲಂ 2(14)(vii) ಮತ್ತು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಮಾದರಿ ನಿಯಮಗಳು 2016 ನಿಯಮ 92 ರಂತೆ ಸಂಬಂಧಪಟ್ಟ ವ್ಯಾಪ್ತಿಯ ಹತ್ತಿರದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗುವುದು. ಪೊಲೀಸ್ ಠಾಣೆಯಿಂದ ಮಗುವನ್ನು 4 ತಿಂಗಳೊಳಗಾಗಿ ಪತ್ತೆ ಹಚ್ಚಲು ಸಾಧ್ಯವಾಗದಿದ್ದಲ್ಲಿ ಅಂತಹ ಪ್ರಕರಣವನ್ನು ಮಾನವ ಕಳ್ಳ ಸಾಗಾಣಿಕೆ ವಿರೋಧಿ ಘಟಕ (Anti Human Traficking Unit)ಕ್ಕೆ ವರ್ಗಾಯಿಸಲಾಗುತ್ತದೆ.

ಸಂಖ್ಯೆ: ಮಮಇ 33 ಮಭಾಬ 2022

Halappa BA

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ
ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.